# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/35/22-23 ದಿನಾಂಕ: 21/05/2022.

ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ.10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 21/05/2022 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಾರ್ಡ್ ಸಮಿತಿ ಸದಸ್ಯರು**

1. ಶ್ರೀ ಅಮರ್ ಸಿಂಗ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
2. ಶ್ರೀ ವಿಜಯ್ ಬೆನಗಿ, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
3. ಶ್ರೀ ಸುಜಿತ್ ಸೋನಿಲ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
4. ಶ್ರೀ ಪ್ರಕಾಶ್ ಕೆ, ಸದಸ್ಯರು
5. ಶ್ರೀ ದಯಾಳ್, ಸದಸ್ಯರು
6. ಶ್ರೀ ಶ್ರೀನಿವಾಸ್, ಸದಸ್ಯರು
7. ಶ್ರೀ ಆರ್.ಎಂ. ಶ್ರೀನಿವಾಸ್, ಸದಸ್ಯರು
8. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು
9. ಶ್ರೀ ಮಲ್ಯಾದಿ, ಸದಸ್ಯರು
10. ಶ್ರೀ ಪ್ರಕಾಶ್ ಕೆ, ಸದಸ್ಯರು
11. ಶ್ರೀ ಶ್ರೀನಿವಾಸ್, ಸದಸ್ಯರು
12. ಶ್ರೀಮತಿ. ಬೇಬಿ ರಾಣಿ

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀ ಈರಣ್ಣ, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀಮತಿ ಡಾ ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ
4. ಸಹಾಯಕ ಅಭಿಯಂತರರು (ವಿದ್ಯುತ್), ಯಲಹಂಕ ವಲಯ, ಬಿ.ಬಿ.ಎಂ.ಪಿ
5. ಶ್ರೀ ಸತ್ಯನಾರಾಯಣ, ಕಂದಾಯ ವಸೂಲಿಗಾರರು
6. ಶ್ರೀ ಪ್ರವೀಣ್, ಹಿರಿಯ ಆರೋಗ್ಯ ಪರಿವೀಕ್ಷಕರು
7. ಶ್ರೀ ನವೀನ್, ಕಿರಿಯ ಆರೋಗ್ಯ ಪರಿವೀಕ್ಷಕರು

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ಕಾರ್ಯದರ್ಶಿಗೆ ತಿಳಿಸಿದರು.

ಬೆಸ್ಕಾಂ, ಓ.ಎಫ್.ಸಿ, ಏರ್‌ಟೆಲ್, ಜಿಯೋ ಹಾಗೂ ಇತರೆ ಕಂಪೆನಿಯವರು ಅಗೆದಿರುವ ರಸ್ತೆಯನ್ನು ಕೂಡಲೇ ದುರಸ್ಥಿಪಡಿಸಲು ಕೋರಿದ್ದು, ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ **ವಾರ್ಡ್ ಅಭಿಯಂತರರಿಗೆ** ಕ್ರಮ ವಹಿಸಲು ತಿಳಿಸಿದರು.

ರಾಮಚಂದ್ರಪುರ ಮುಖ್ಯ ರಸ್ತೆಯಲ್ಲಿ ರಾಜಕಾಲುವೆ ಹಾದು ಹೋಗಿದ್ದು, ಸಾರ್ವಜನಿಕರ ಅನುಕೂಲಕ್ಕಾಗಿ ಕಲ್ವರ್ಟ್ ಅಳವಡಿಸಲು ಹಾಗೂ ವಾರ್ಡ್ ನಂ 10ರ ದೊಡ್ಡಬೊಮ್ಮಸಂದ್ರ ವ್ಯಾಪ್ತಿಯಲ್ಲಿನ ರಾಜಕಾಲುವೆಯ ಮಣ್ಣು ಮತ್ತು ಹೂಳನ್ನು ತೆಗೆಯಲು ಕೋರಿದ್ದು, ನೋಡೆಲ್ ಅಧಿಕಾರಿಗಳು, **ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರು ಗಾಲುವೆ** ರವರಿಗೆ ತಿಳಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.

ಹನುಮಾನ್ ಬಡಾವಣೆ, ರಾಮಚಂದ್ರಪುರ ಮುಖ್ಯ ರಸ್ತೆಯ ಬಿ.ಡಬ್ಲ್ಯೂ.ಎಸ್.ಎಸ್.ಬಿ ಮ್ಯಾನ್‌ಹೋಲ್‌ಗಳಲ್ಲಿ ನೀರು ಸೋರಿಕೆಯಾಗುತ್ತಿರುವುದರಿಂದ ಸರಿಪಡಿಸಲು ಕೋರಿದ್ದು, ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ **ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ** ರವರಿಗೆ ಕ್ರಮ ಕೈಗೊಳ್ಳಲು ತಿಳಿಸಿದರು.

ದೊಡ್ಡಬೊಮ್ಮಸಂದ್ರ ವಾರ್ಡ್ ವ್ಯಾಪ್ತಿಯಲ್ಲಿ ಶಿಥಿಲಾವಸ್ಥೆಯಲ್ಲಿರುವ ಮರಗಳನ್ನು ಹಾಗೂ ರಸ್ತೆಗೆ ಅಡ್ಡಲಾಗಿ ಬೆಳೆದಿರುವ ಮರದ ರೆಂಬೆ ಕೊಂಬೆಗಳನ್ನು ತೆರವುಗೊಳಿಸಲು ಕೋರಿದ್ದು, ನೋಡೆಲ್ ಅಧಿಕಾರಿ ರವರು **ಉಪ ಅರಣ್ಯ ಸಂರಕ್ಷಣಾಧಿಕಾರಿ, ಯಲಹಂಕ** ರವರಿಗೆ ತಿಳಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.

ನಂಜಪ್ಪ ಲೇಔಟ್, 8ನೇ ಅಡ್ಡರಸ್ತೆಯಲ್ಲಿರುವ ಎಸ್.ಎಲ್.ವಿ ದುರ್ಗಾ ಅಪಾರ್ಟ್‌ಮೆಂಟ್ ಕಾಂಪೌಂಡ್ ಗೋಡೆ ಕುಸಿದಿದ್ದು, ಪಕ್ಕದ ಖಾಲಿ ಸ್ವತ್ತಿನಿಂದ ನಮ್ಮ ಜಾಗಕ್ಕೆ ಹಾನಿಯಾಗಿದೆಯೆಂದು ಅಪಾರ್ಟ್‌ಮೆಂಟ್ ನಿವಾಸಿಗಳು ದೂರಿದ್ದು, ನೋಡೆಲ್ ಅಧಿಕಾರಿ ರವರು **ಸಹಾಯಕ ಕಂದಾಯ ಅಧಿಕಾರಿ ಹಾಗೂ ಸಹಾಯಕ ಅಭಿಯಂತರರು ಜಂಟಿ ತಪಾಸಣೆ** ಕೈಗೊಂಡು ಕ್ರಮ ವಹಿಸಲು ತಿಳಿಸಿದರು.

ದೊಡ್ಡಬೊಮ್ಮಸಂದ್ರ ಮುಖ್ಯ ರಸ್ತೆ, ರಾಮಚಂದ್ರಪುರ ಮುಖ್ಯ ರಸ್ತೆ, ನಂಜಪ್ಪ ಲೇಔಟ್ ಮುಖ್ಯ ರಸ್ತೆಯಲ್ಲಿ ಒತ್ತುವರಿ ಮಾಡಿರುವ ಪಾದಚಾರಿ ಮಾರ್ಗವನ್ನು ತೆರವುಗೊಳಿಸಲು ಕೋರಿದ್ದು, ನೋಡೆಲ್ ಅಧಿಕಾರಿ ರವರು **ಸಹಾಯಕ ಅಭಿಯಂತರರು, ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಟ್ರಾಫಿಕ್ ಪೋಲೀಸ್ ರವರೊಂದಿಗೆ ಕ್ರಮ** ವಹಿಸಲು ತಿಳಿಸಿದರು.

ದೊಡ್ಡಬೊಮ್ಮಸಂದ್ರ ಸರ್ಕಾರಿ ಪ್ರಾಥಮಿಕ ಶಾಲೆಯ ಛಾವಣಿಯನ್ನು ದುರಸ್ಥಿಪಡಿಸಲು ಕೋರಿದ್ದು, ನೋಡೆಲ್ ಅಧಿಕಾರಿ ರವರು ವಾರ್ಡಿನ ನಿರ್ವಹಣೆಗಾಗಿ ಅನುದಾನದ ಲಭ್ಯತೆ ಇಲ್ಲದೆ ಇರುವುದರಿಂದ **ಜಂಟಿ ಆಯುಕ್ತರೊಡನೆ ಚರ್ಚಿಸಿ** ಕ್ರಮ ವಹಿಸುವುದಾಗಿ ತಿಳಿಸಿದರು.

ರಾಮಚಂದ್ರಪುರ ಮಹೇಶ್ವರಮ್ಮ ದೇವಸ್ಥಾನದ ಹತ್ತಿರ ಚರಂಡಿಯಲ್ಲಿ ತುಂಬಿರುವ ಹೂಳು ಮತ್ತು ಮಣ್ಣನ್ನು ತೆರವುಗೊಳಿಸಲು ಕೋರಿದ್ದು, ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ **ವಾರ್ಡ್ ಅಭಿಯಂತರರಿಗೆ** ಕ್ರಮ ವಹಿಸಲು ತಿಳಿಸಿದರು.

ವಾರ್ಡ್ ನಂ 10ರ ದೊಡ್ಡಬೊಮ್ಮಸಂದ್ರ ವ್ಯಾಪ್ತಿಯಲ್ಲಿ ಡೆಂಗ್ಯೂ ಜ್ವರ ಹೆಚ್ಚಾಗುತ್ತಿರುವುದರಿಂದ ಸೊಳ್ಳೆ ಔಷಧವನ್ನು ಸಿಂಪಡಿಸಲು ಕೋರಿದ್ದು, ನೋಡೆಲ್ ಅಧಿಕಾರಿಗಳು, **ಹಿರಿಯ ಆರೋಗ್ಯ ಪರಿವೀಕ್ಷಕರು** ರವರಿಗೆ ಕ್ರಮ ಕೈಗೊಳ್ಳಲು ತಿಳಿಸಿದರು.

ರಾಮಚಂದ್ರಪುರದಲ್ಲಿ ಹೊಸದಾಗಿ ನಿರ್ಮಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ ಆರೋಗ್ಯ ವೈದ್ಯಾಧಿಕಾರಿ ರವರು ಹಾಗೂ ಸಾರ್ವಜನಿಕರು ಕೋರಿದ್ದು, ನೋಡೆಲ್ ಅಧಿಕಾರಿ ರವರು ಸಹಾಯಕ ಅಭಿಯಂತರರಿಗೆ ಕ್ರಮ ವಹಿಸಲು ತಿಳಿಸಿದರು.

**ಶ್ರೀಮತಿ ಡಾ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ:-** ಕೋವಿಡ್ ರೋಗ ಹರಡುವಿಕೆ ಮತ್ತು ತಡೆಗಟ್ಟುವಿಕೆ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು, ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಲಸಿಕೆ ನೀಡುತ್ತಿರುವುದರಿಂದ ಸಾರ್ವಜನಿಕರು ಲಸಿಕೆಯ ಸದುಪಯೋಗ ಪಡಿಸಿಕೊಳ್ಳಲು ಹಾಗೂ ವಾರ್ಡ್ ನಂ 10ರ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಪ್ರಕರಣಗಳು ದಾಖಲಾಗದೆ ಇರುವ ಬಗ್ಗೆ ಸಂತಸ ವ್ಯಕ್ತ ಪಡಿಸಿದರು. ಮಕ್ಕಳು ಕಾಲಕ್ಕೆ ತಕ್ಕಂತೆ ಚುಚ್ಚುಮದ್ದು ಹಾಗೂ ಇತರೆ ಲಸಿಕೆಗಳನ್ನು ಹಾಕಿಸಿಕೊಳ್ಳಲು ತಿಳುವಳಿಕೆ ನೀಡಿದರು. ಮಳೆಗಾಲ ಪ್ರಾರಂಭವಾಗುತ್ತಿರುವುದರಿಂದ ಆಶಾ ಕಾರ್ಯಕರ್ತೆಯರು ಮನೆಮನೆಗೆ ತೆರಳಿ ಸಾಂಕ್ರಮಿಕ ರೋಗಗಳ ಬಗ್ಗೆ ಎಚ್ಚರಿಕೆಯಿಂದ ಇರಬೇಕೆಂದು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದರ ಜೊತೆಗೆ ಡೆಂಗ್ಯೂ ಜ್ವರ ಹೆಚ್ಚಾಗಿ ಹರಡುತ್ತಿರುವುದರಿಂದ ಸಾರ್ವಜನಿಕರು ಜಾಗರೂಕತೆಯಿಂದ ಇರಬೇಕೆಂದು ತಿಳಿಸಿದರು.

ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 10, ದೊಡ್ಡಬೊಮ್ಮಸಂದ್ರ

ನೋಡೆಲ್ ಅಧಿಕಾರಿ ವಾರ್ಡ್-10 ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರಿಗೆ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ/ಯೋಜನಾ ವಿಭಾಗ, ಬಿ.ಬಿ.ಎಂ.ಪಿ ರವರಿಗೆ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ ರವರಿಗೆ ಸಲ್ಲಿಸುತ್ತಾ ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಹಾಗೂ ಘನತ್ಯಾಜ್ಯ ನಿರ್ವಹಣೆಯ ಗುತ್ತಿಗೆದಾರರೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ, ಬೆಂಗಳೂರು.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೀದಿ ದೀಪಗಳ ನಿರ್ವಹಣೆ, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ವಿದ್ಯಾರಣ್ಯಪುರ, ಬೆಂಗಳೂರು ರವರಿಗೆ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
10. ಕಲ್ಯಾಣಾಧಿಕಾರಿ, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
11. ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
12. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಲಾ ಅಂಡ್ ಆರ್ಡರ್) ರವರಿಗೆ ಸಲ್ಲಿಸಿ ಸಭೆಗೆ ತಪ್ಪದೇ ಹಾಜರಿರಲು ಕೋರಿದೆ.
13. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಸಂಚಾರ) ರವರಿಗೆ ಸಲ್ಲಿಸಿ ಸಭೆಗೆ ತಪ್ಪದೇ ಹಾಜರಿರಲು ಕೋರಿದೆ.
14. ಕಛೇರಿ ಕಡತಕ್ಕೆ.